# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್-145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:12/07/2021 ರಂದು ಸೋಮವಾರ ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು Zoom Application Link ಮೂಲಕ ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಅಂತರ್ಜಾಲದ ಲಿಂಕ್ ಮುಖಾಂತರ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಸಭೆಯ ವಾರ್ಡ್ ಸಮಿತಿ ಅಧ್ಯಕ್ಷರಾದ ಸನ್ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು, ವಾರ್ಡ್-145.
3. ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
4. ಕಿರಿಯ ಅಭಿಯಂತರರು, ವಿದ್ಯುತ್ ವಿಭಾಗ, ಬಿಬಿಎಂಪಿ.
5. ನಾಗರೀಕ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

*********

1. ವಾರ್ಡ್ ವ್ಯಾಪ್ತಿಯಲ್ಲಿ 18-40 ವರ್ಷ ವಯಸ್ಸಿನ ಬಹಳ ಜನರಿಗೆ ಇದುವರೆವಿಗೂ ವ್ಯಾಕ್ಸಿನ್ ನೀಡಿರುವುದಿಲ್ಲ ಸಂಬಂಧಿಸಿದಂತೆ ಒಂದು ಕ್ಯಾಂಪ್ ಮಾಡಲು ಕೋರಿದರು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಘನ ಸರ್ಕಾರದ ಆದೇಶದಂತೆ ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ವ್ಯಾಕ್ಸಿನ್ ನೀಡಲಾಗುತ್ತಿದೆ, ಈಗ ಕಾಲೇಜುಗಳು ಪ್ರಾರಂಭವಾಗುತ್ತಿರುವುದರಿಂದ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಥಮ ಆದ್ಯತೆ ನೀಡಲಾಗುತ್ತಿದೆ.
2. ವಿಲ್ಸನ್‌ಗಾರ್ಡನ್ 11ನೇ ಅಡ್ಡರಸ್ತೆಯಲ್ಲಿ ತುಂಬಾ ಗಾರ್ಬೇಜ್ ಬೀಳುತ್ತಿದೆ ಹಾಗೂ ಹಸುಗಳ ಹಾವಳಿ ಹೆಚ್ಚಾಗಿದ್ದು, ತಡೆಯಲು ಕೋರಿದರು, ಈ ಬಗ್ಗೆ ಎರಡು ದಿನದಲ್ಲಿ ಘನತ್ಯಾಜ್ಯ ನಿರ್ವಹಣೆ ಅಧಿಕಾರಿ/ಸಿಬ್ಬಂದಿಯೊಂದಿಗೆ ಕ್ರಮ ಕೈಗೊಳ್ಳಲಾಗುವುದೆಂದು ಅಧ್ಯಕ್ಷರು ಸಭೆಗೆ ತಿಳಿಸಿದರು



Scanned with CamScanner

3. ವಿಲ್ಸನ್‌ಗಾರ್ಡನ್ ವ್ಯಾಪ್ತಿಯಲ್ಲಿ ತಡರಾತ್ರಿ ಹಾಗೂ ಬೆಳಗಿನ ಜಾವ 4.00 ಗಂಟೆಯಿಂದಲೇ ಹೂವಿನ ಅಂಗಡಿಗಳು ಹಾಗೂ ಗೋಡೋನ್‌ಗಳು ಕಾರ್ಯಾರಂಭ ಮಾಡುತ್ತಿದ್ದು, ಇದರಿಂದ ಅಕ್ಕ-ಪಕ್ಕದ ನಿವಾಸಿಗಳಿಗೆ ತೊಂದರೆಯಾಗುತ್ತಿದೆ ಎಂದು ತಿಳಿಸಿದರು. ಸದರಿ ವಿಷಯವನ್ನು ಪೊಲೀಸ್ ಠಾಣೆ, ಕಾನೂನು ಮತ್ತು ಸುವ್ಯವಸ್ಥೆ ವಿಭಾಗ ರವರಿಗೆ ತಿಳಿಸಿ ಸಾರ್ವಜನಿಕರಿಗೆ ರಾತ್ರಿವೇಳೆ ತೊಂದರೆಯಾಗದಂತೆ ಕ್ರಮ ವಹಿಸಲು ಕೋರಲಾಗುವುದೆಂದು ಸಭೆಗೆ ತಿಳಿಸಿದರು.

4. ಶ್ರೀ. ಮಲ್ಲಿಕಾರ್ಜುನ್ ರವರು ಮಾತನಾಡಿ ನಾನು ಬೈಕ್‌ನಲ್ಲಿ ಸಂಚರಿಸುವಾಗ ಗಾಳಿಪಟ ಹಾರಿಸಲು ಬಳಸುವ ಮಾಂಜಾದಾರ ನನ್ನ ಕುತ್ತಿಗೆ ಹಾಗೂ ಕೈಬೆರಳುಗಳನ್ನು ಕತ್ತರಿಸಿದ್ದು, ಇದರಿಂದ ನನಗೆ ತೀವ್ರ ತರಹದ ತೊಂದರೆಯಾಗಿದ್ದು, ಪ್ರಾಣಹಾನಿಯಾಗುವ ಸಂಭವವೂ ಹೆಚ್ಚಾಗಿರುವುದರಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ನಗರ ವ್ಯಾಪ್ತಿಯಲ್ಲಿ ಗಾಳಿಪಟ ಹಾರಿಸದಂತೆ ಕಾನೂನು ಕ್ರಮ ವಹಿಸಲು ಕೋರಿದರು. ಸದರಿ ವಿಷಯವನ್ನು ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಗಮನಕ್ಕೆ ತರಲಾಗುವುದೆಂದು ಅಧ್ಯಕ್ಷರು ಸಭೆಗೆ ತಿಳಿಸಿದರು.

5. ವಿಲ್ಸನ್‌ಗಾರ್ಡನ್ 10ನೇ ಮುಖ್ಯರಸ್ತೆಯಲ್ಲಿ 10ನೇ ಅಡ್ಡರಸ್ತೆಯಿಂದ 12ನೇ ಅಡ್ಡರಸ್ತೆಯವರೆಗೆ BWSSB ವತಿಯಿಂದ ಅಗೆದು ಪುನಃ ತುಂಬಿರುವ ಭಾಗವು ಕುಗ್ಗಿದ್ದು, (Sink age) ಸದರಿ ಭಾಗವನ್ನು ದುರಸ್ಥಿಪಡಿಸಲು ಶ್ರೀ. ರಮೇಶ್ ರವರು ಕೋರಿದರು. ಈ ವಿಷಯವಾಗಿ ಸಹಾಯಕ ಅಭಿಯಂತರರು ಮಾತನಾಡಿ ಸ್ಥಳವನ್ನು ಪರಿಶೀಲಿಸಿ ಕ್ರಮವನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

6. ವಿಲ್ಸನ್‌ಗಾರ್ಡನ್ 8ನೇ ಅಡ್ಡರಸ್ತೆ ಹಾಗೂ ಇತರೆ ರಸ್ತೆಗಳಲ್ಲಿ ನೀರು ಸರಬರಾಜು ವಾಲ್‌ಗಳ ಮೇಲೆ ಅನಧಿಕೃತ ವಾಹನಗಳನ್ನು ಪಾರ್ಕಿಂಗ್ ಮಾಡುತ್ತಿರುವುದರಿಂದ ನಿಗಧಿತ ಸಮಯಕ್ಕೆ ನೀರು ಸರಬರಾಜು ಮಾಡಲು ಸಾಧ್ಯವಾಗುತ್ತಿಲ್ಲ ಎಂದು ದೂರಿದರು. ರಸ್ತೆಗಳಲ್ಲಿ ಅನಧಿಕೃತ ಪಾರ್ಕಿಂಗ್‌ನ್ನು ತಡೆಯಲು ಸಂಚಾರ ವಿಭಾಗ ಪೊಲೀಸ್ ರವರು ಕ್ರಮ ಕೈಗೊಳ್ಳಲು ಕೋರಲಾಯಿತು.



Scanned with CamScanner

7. ವಿಲ್ಸನ್‌ಗಾರ್ಡನ್ 7ನೇ ಅಡ್ಡರಸ್ತೆಯ ನಿವಾಸಿಯಾದ ಶ್ರೀ. ಬಾಲಾಜಿ ರವರು ಮಾತನಾಡಿ ಫುಟ್‌ಪಾತ್ ಮೇಲೆ ಟ್ರಾನ್ಸ್‌ಫಾರ್ಮರ್ ಅಳವಡಿಸಿದ್ದು, ಪ್ರತಿದಿನ ಅದರಿಂದ ಹೊಗೆ ಹಾಗೂ ಬೆಂಕಿ ಬರುತ್ತಿದೆ ಎಂದು ದೂರಿದರು. ಸದರಿ ವಿಷಯವನ್ನು ಸಹಾಯಕ ಅಭಿಯಂತರರು, ಬೆಸ್ಕಾಂ ರವರ ಗಮನಕ್ಕೆ ತಿಳಿಸಲಾಗಿದ್ದು, ಕ್ರಮ ಕೈಗೊಳ್ಳಲು ಕೋರಲಾಯಿತು.

8. ಶ್ರೀ. ಶಂಕರ್ ರವರು ಮಾತನಾಡಿ, ಕೋವಿಡ್ 2ನೇ ಅಲೆಯಲ್ಲಿ ತುಂಬಾ ಜೀವಹಾನಿಯಾಗಿರುತ್ತದೆ, ಈಗಾಗಲೇ 3ನೇ ಅಲೆ ಪ್ರಾರಂಭವಾಗುತ್ತಿದೆ ಎಂದು ಸುದ್ದಿ ವಾಹಿನಿಗಳಲ್ಲಿ ಪ್ರಸಾರವಾಗುತ್ತಿದ್ದು, ಮುಂಜಾಗ್ರತಾ ಕ್ರಮ ಕೈಗೊಳ್ಳಲು ಕೋರಿದರು. ವೈದ್ಯಾಧಿಕಾರಿಗಳು ಪ್ರಾಥಮಿಕ ಆರೋಗ್ಯ ಕೇಂದ್ರ ವಿಲ್ಸನ್‌ಗಾರ್ಡನ್ ಹಾಗೂ ಸಭೆಯ ಅಧ್ಯಕ್ಷರು ಮಾತನಾಡಿ ಸಂಬಂಧಿಸಿದಂತೆ ಮುಂಜಾಗ್ರತಾ ಕ್ರಮ ವಹಿಸಲು ಈಗಾಗಲೇ ಅನೇಕ ಸಭೆಗಳು ನಡೆಯುತ್ತಿವೆ ಎಂದು ಸಭೆಗೆ ತಿಳಿಸಿದರು.

9. ವಾರ್ಡ್ ಮಟ್ಟದಲ್ಲಿ ಒಂದು ಪಶು ವೈದ್ಯಶಾಲೆಯನ್ನು ತೆರೆಯಲು ಸಾರ್ವಜನಿಕರು ಕೋರಿದರು, ಈ ಸಂಬಂಧ ಅಧ್ಯಕ್ಷರು ಮಾತನಾಡಿ ಸದರಿ ವಿಷಯವನ್ನು ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಗಮನಕ್ಕೆ ತರಲಾಗುವುದೆಂದು ಸಭೆಗೆ ತಿಳಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner